Confederation of Indian Industry

| | |
|---|---|
| Headline | South Asia’s largest construction equipment trade fair organised |
| **Publication** | Vijaya Karnataka |
| **Date** | 18.05.2022 |
| **Location** | Bangalore |

# ತಂತ್ರಜ್ಞಾನದ ಸದ್ಬಳಕೆ ಅಗತ್ಯ



**ವಿಕ ಸುದ್ದಿಲೋಕ** ಬೆಂಗಳೂರು

ಮೂಲಸೌಲಭ್ಯ ಉದ್ಯಮ ದೊಡ್ಡ ಬದಲಾವಣೆ ತರಲಿದೆ. ತಂತ್ರಜ್ಞಾನದ ಸದ್ಬಳಕೆಯಿಂದ ಯೋಜನೆಗಳ ತ್ವರಿತ ಅನುಷ್ಠಾನ ಸಾಧ್ಯವಾಗಲಿದೆ ಎಂದು ಮುಖ್ಯಮಂತ್ರಿ ಬಸವರಾಜ ಬೊಮ್ಮಾಯಿ ತಿಳಿಸಿದರು.

ಬಿಐಇಸಿಯಲ್ಲಿ ಮಂಗಳವಾರ ಆರಂಭವಾದ ಕಟ್ಟಡ ನಿರ್ಮಾಣ ಸಲಕರಣೆಗಳ ಎಕ್ಸ್‌ಕಾನ್ 2022 ವಸ್ತು ಪ್ರದರ್ಶನವನ್ನು ಉದ್ಘಾಟಿಸಿ ಮಾತನಾಡಿದರು.

''ಕಂಪನಿಗಳ ನಾವೀನ್ಯತೆ, ಹೊಸ ಚಿಂತನೆಗಳ ವಿಚಾರವಿನಿಮಯ ಮಾಡಿಕೊಳ್ಳಲು ಎಕ್ಸ್ ಕಾನ್ 2022 ವಸ್ತು ಪ್ರದರ್ಶನ ಸೂಕ್ತ ವೇದಿಕೆಯಾಗಿದೆ. ರಾಜ್ಯದಲ್ಲಿ ಹೂಡಿಕೆ ಮಾಡಲಿಚ್ಛಿಸುವ ಉದ್ದಿಮೆಗಳಿಗೆ ಸರಕಾರ ಎಲ್ಲ ರೀತಿಯ ಸಹಕಾರ ನೀಡಲಿದೆ,'' ಎಂದರು. ''ರಾಜ್ಯದಲ್ಲಿ ಸಣ್ಣ ಗ್ಯಾರೇಜಿನಿಂದ ಹಿಡಿದು ದೊಡ್ಡ ಕೈಗಾರಿಕೆಗಳವರೆಗೆ ಆರ ಆ್ಯಂಡ್ ಡಿ ನೀತಿಯನ್ನು ಜಾರಿಗೊಳಿಸಲಾಗಿದೆ. ಯುವಕರಲ್ಲಿ ಸ್ವಂತಿಕೆಯನ್ನು ಹಾಗೂ ನಾವೀನ್ಯತೆಯನ್ನು ಪ್ರೋತ್ಸಾಹಿಸಬೇಕಿದೆ,'' ಎಂದರು.